ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
KARNATAKA LEGISLATIVE ASSEMBLY RESEARCH AND REFERENCE BRANCH

ಪತ್ರಿಕಾ ತುಣುಕುಗಳು
**PAPER CLIPPINGS**

ಇಲಾಖೆ / ವಿಷಯ : DEPARTMENT / SUBJECT: ಸಚಿವ ಸಂಪುಟ

ಪತ್ರಿಕೆಯ ಹೆಸರು : NAME OF THE NEWS PAPER: ಪ್ರಜಾವಾಣಿ ದಿನಾಂಕ : DATE : 13/12/19

ಮಾರ್ಗಸೂಚಿ ಮೌಲ್ಯದ ಪ್ರಕಾರ ದಂಡ ನಿಗದಿ • ಸಚಿವ ಸಂಪುಟ ತೀರ್ಮಾನ

# ಅಕ್ರಮ ಕಟ್ಟಡ ಸಕ್ರಮಕ್ಕೆ ಒಪ್ಪಿಗೆ

13/12/19

ಪ್ರಜಾವಾಣಿ ವಾರ್ತೆ

ಬೆಂಗಳೂರು: ಬಿಡಿಎ ಬಡಾವಣೆಗಳಲ್ಲಿ ಸೂಕ್ತ ಪ್ರಾಧಿಕಾರಗಳು ಮತ್ತು ಇಲಾಖೆಗಳಿಂದ ಅನುಮತಿ ಪಡೆಯದೇ ನಿರ್ಮಿಸಿರುವ ಮನೆ ಮತ್ತು ಕಟ್ಟಡಗಳನ್ನು ಸಕ್ರಮಗೊಳಿಸಲು ಸಚಿವ ಸಂಪುಟ ಸಭೆ ತೀರ್ಮಾನಿಸಿದೆ.

ಸುಮಾರು 5,000 ಎಕರೆ ಪ್ರದೇಶದಲ್ಲಿ ಈ ರೀತಿಯ 75,000 ಕಟ್ಟಡಗಳು ಇರುವುದನ್ನು ಪತ್ತೆ ಮಾಡಲಾಗಿದೆ. ದಂಡ ಕಟ್ಟಿ ಸಕ್ರಮಗೊಳಿಸಲು ಅವಕಾಶ ನೀಡಲಾಗುವುದು ಎಂದು ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವ ಜೆ.ಸಿ.ಮಾಧುಸ್ವಾಮಿ ಸುದ್ದಿಗಾರರಿಗೆ ತಿಳಿಸಿದರು.

ಕಟ್ಟಡ ಯೋಜನೆಗೆ ಒಪ್ಪಿಗೆ ಪಡೆಯದೇ ಇರುವುದು, ಅಭಿವೃದ್ಧಿ ಶುಲ್ಕ ಪಾವತಿಸದಿರುವುದು, ನಿಯಮ ಉಲ್ಲಂಘಿಸಿ ಕಟ್ಟಡ ನಿರ್ಮಿಸಿರುವವರು ಕಟ್ಟಡ ಸಕ್ರಮಗೊಳಿಸಿಕೊಳ್ಳಬೇಕು. ಇದಕ್ಕಾಗಿ ಮುಂದಿನ ಅಧಿವೇಶನದಲ್ಲಿ ಬಿಡಿಎ ಕಾಯ್ದೆಯ 38 ಸಿಗೆ ತಿದ್ದುಪಡಿ ಮಾಡಲಾಗುವುದು ಎಂದು ಅವರು ವಿವರಿಸಿದರು.

ಇದಕ್ಕಾಗಿ ಉಪ ಮುಖ್ಯಮಂತ್ರಿ ಡಾ.ಸಿ.ಎನ್.ಅಶ್ವತ್ಥನಾರಾಯಣ ಅಧ್ಯಕ್ಷತೆಯಲ್ಲಿ ಸಂಪುಟ ಉಪಸಮಿತಿ ರಚಿಸಲಾಗುವುದು. ಇದರಲ್ಲಿ ಕಂದಾಯ ಸಚಿವ ಆರ್.ಅಶೋಕ, ಶಿಕ್ಷಣ ಸಚಿವ ಎಸ್.ಸುರೇಶ್ ಕುಮಾರ್, ವಸತಿ ಸಚಿವ ವಿ.ಸೋಮಣ್ಣ ಸದಸ್ಯರಾಗಿರುತ್ತಾರೆ. ಮಾರ್ಗಸೂಚಿ ಮೌಲ್ಯದ ಪ್ರಕಾರ ದಂಡದ ಪ್ರಮಾಣವನ್ನು ನಿಗದಿ ಮಾಡಲಾಗುವುದು. ಆರಂಭಿಕ ಪ್ರಸ್ತಾವನೆಯ ಪ್ರಕಾರ, 30x40 ಅಳತೆಯ ನಿವೇಶನಗಳಿಗೆ ಹಾಲಿ ಮಾರ್ಗಸೂಚಿ ಮೌಲ್ಯದ ಶೇ 70 ರಷ್ಟು ದಂಡ ವಿಧಿಸಲು ಉದ್ದೇಶಿಸಲಾಗಿದೆ. ಇದಕ್ಕಿಂತ ದೊಡ್ಡ ಸ್ವತ್ತಿಗೆ ಶೇ 100 ರಷ್ಟು ದಂಡ ವಿಧಿಸಲಾಗುವುದು ಎಂದರು.

**ಪಿನಾಕಿನಿ ಪುನಶ್ಚೇತನ ಯೋಜನೆ:** ದಕ್ಷಿಣ ಪಿನಾಕಿನಿ ನದಿ ಪುನಶ್ಚೇತನ ಯೋಜನೆಗೆ ಅನುಮತಿ ನೀಡುವಂತೆ ಅಜೀಂ ಪ್ರೇಮ್‌ಜೀ ಫೌಂಡೇಷನ್, ಟಾಟಾ ಟ್ರಸ್ಟ್, ಇನ್ಫೋಸಿಸ್, ರಾಷ್ಟ್ರೀಕೃತ ಬ್ಯಾಂಕ್‌ಗಳು ಪ್ರಸ್ತಾವನೆ ಸಲ್ಲಿಸಿದ್ದು, ಇದರ ಪರಿಶೀಲನೆಗೆ ಒಪ್ಪಿಗೆ ನೀಡಲಾಗಿದೆ. ₹2,600 ಕೋಟಿ ವೆಚ್ಚದಲ್ಲಿ ನದಿ ಪುನಶ್ಚೇತನ ಯೋಜನೆಯನ್ನು ಕೈಗೊಳ್ಳಲಿವೆ ಇದಕ್ಕೆ, ಕಂಪನಿಗಳು ಸಿಎಸ್‌ಆರ್ ನಿಧಿಯಡಿ ₹500ಕೋಟಿ ನೀಡಲಿದ್ದು, ಉಳಿದ ಹಣವನ್ನು ಏಷ್ಯಾ ಅಭಿವೃದ್ಧಿ ಬ್ಯಾಂಕ್ ಮತ್ತಿತರ ಮೂಲಗಳಿಂದ ಸಾಲ ಪಡೆಯಲಿವೆ. ದಕ್ಷಿಣ ಪಿನಾಕಿನಿ ಪುನಶ್ಚೇತನ ಟ್ರಸ್ಟ್ ಅಡಿ ಈ ಕಾರ್ಯವನ್ನು ಕೈಗೆತ್ತಿಕೊಳ್ಳಲು ಉದ್ದೇಶಿಸಿವೆ ಎಂದರು.

## ಪೆರಿಫೆರಲ್ ರಿಂಗ್ ರಸ್ತೆ ಮಾತುಕತೆಗೆ ಅನುಮತಿ

ತುಮಕೂರು ರಸ್ತೆಯಿಂದ ಬಳ್ಳಾರಿ ರಸ್ತೆ (₹1,746 ಕೋಟಿ), ಬಳ್ಳಾರಿ ರಸ್ತೆಯಿಂದ ಹಳೆ ಮದ್ರಾಸ್ ರಸ್ತೆ(₹1,417 ಕೋಟಿ), ಹಳೆ ಮದ್ರಾಸ್ ರಸ್ತೆಯಿಂದ ಹೊಸೂರು ರಸ್ತೆ (₹2,453 ಕೋಟಿ) ಪೆರಿಫೆರಲ್ ರಿಂಗ್ ರಸ್ತೆ ನಿರ್ಮಾಣಕ್ಕೆ ಜಪಾನ್ ಅಂತರ ರಾಷ್ಟ್ರೀಯ ಸಹಕಾರ ಏಜೆನ್ಸಿ(ಜೈಕಾ) ಜತೆ ಮಾತುಕತೆ ಮತ್ತು ಒಪ್ಪಂದಕ್ಕೆ ಬಿಡಿಎಗೆ ಅನುಮತಿ ನೀಡಲಾಗಿದೆ ಎಂದು ಸಚಿವ ಮಾಧುಸ್ವಾಮಿ ತಿಳಿಸಿದರು.

ಒಟ್ಟು 65.5 ಕಿ.ಮೀ ಉದ್ದದ ಈ ರಸ್ತೆ ನಿರ್ಮಾಣಕ್ಕೆ 67 ಗ್ರಾಮಗಳಲ್ಲಿ 1,810 ಎಕರೆ ಜಮೀನು ಸ್ವಾಧೀನಪಡಿಸಿಕೊಳ್ಳಬೇಕಾಗುತ್ತದೆ. ಇದಕ್ಕೆ ರಾಜ್ಯ ಸರ್ಕಾರ ತನ್ನ ಪಾಲಿನ ಮೊತ್ತ ₹901.72 ಕೋಟಿ ನೀಡಲಿದೆ ಎಂದು ಅವರು ಹೇಳಿದರು.

ಯಲಹಂಕ ಸಮೀಪದ ರಾಜಾನುಕುಂಟೆಯಿಂದ ನೆಲಮಂಗಲ ಸಮೀಪದ ಮಧುರೆವರೆಗೆ ಸಂಪರ್ಕ ರಸ್ತೆ ನಿರ್ಮಾಣಕ್ಕೆ ₹12 ಕೋಟಿ ನೀಡಲು ಅನುಮೋದನೆ ನೀಡಲಾಗಿದೆ ಎಂದೂ ಅವರು ತಿಳಿಸಿದರು.